ಗ್ರಾಮಗಳಲ್ಲಿ ನ್ಯಾಯಬೆಲೆ ಅಂಗಡಿಗಳು

565(1136); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ಸೊರಬ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮಗಳಲ್ಲಿ ನ್ಯಾಯಬೆಲೆ ಅಂಗಡಿಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಪ್ರತಿ ಗ್ರಾಮಗಳಲ್ಲಿ ಪಡಿತರ ಚೀಟಿ ವಿತರಿಸುವ ವ್ಯವಸ್ಥೆ ಮಾಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಮಾಹಿತಿ ನೀಡುವುದು);

ಇ) ಹಾಗಿದ್ದಲ್ಲಿ, ಎಷ್ಟು ಅವಧಿಯೊಳಗಾಗಿ ಈ ವ್ಯವಸ್ಥೆಯನ್ನು ಕಲ್ಪಿಸಲಾಗುವುದು (ಮಾಹಿತಿ ನೀಡುವುದು)?

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಇಲ್ಲ.

ಸೊರಬ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಒಟ್ಟು 67 ನ್ಯಾಯಬೆಲೆ ಅಂಗಡಿಗಳ ಮುಖಾಂತರ ಎಲ್ಲಾ ಗ್ರಾಮಗಳನ್ನು ಆಯಾ ನ್ಯಾಯಬೆಲೆ ಅಂಗಡಿಗೆ ಲಗತ್ತಿಸಿ ಪಡಿತರ ವಿತರಣೆ ಮಾಡಲಾಗುತ್ತಿದೆ.

ಆ) ಪಡಿತರ ಚೀಟಿ ವಿತರಿಸುವ ಕಾರ್ಯವನ್ನು ಸೊರಬ ತಾಲ್ಲೂಕಿನ 39 ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ನಗರ ಪ್ರದೇಶದ ತಾಲ್ಲೂಕು ಕಛೇರಿಗಳಲ್ಲಿ ಮಾಡಲಾಗುತ್ತದೆ. ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿ ವಿತರಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.